ಬೆಂಗಳೂರು ಉತ್ತರ ವಿಶ್ವವಿದ್ಯಾಲಯ

ಶ್ರೀ ದೇವರಾಜು ಅರಸು ಟಮಕ ಕೋಲಾರ-563103

ಸಂಖ್ಯೆ: ಬೆಂ.ಉ.ವಿ.ವಿ/ ಬಿ.ಇಡಿ/ ಸಂಯೋಜನೆ/ 468 / 2025-26 ದಿನಾಂಕ: 04.06.2025

**ಅಧಿಸೂಚನೆ**

**ವಿಷಯ:** 2025-26 ನೇ ಶೈಕ್ಷಣಿಕ ಸಾಲಿಗೆ ಶಿಕ್ಷಣ ಕಾಲೇಜು ಸಂಯೋಜನೆ ನವೀಕರಿಸುವ ಬಗ್ಗೆ.

**ಉಲ್ಲೇಖ:** 1. ಸಾಮಾನ್ಯ ವಿದ್ಯಾವಿಷಯಕ ಪರಿಷತ್ತಿನ ಸಭೆಯ ನಡಾವಳಿ ದಿನಾಂಕ: 03.02.2025

2.ಸಾಮಾನ್ಯಸಿಂಡಿಕೇಟ್ ಸಭೆಯ ನಡಾವಳಿ ದಿನಾಂಕ: 04.02.2025

3. ಮಾನ್ಯ ಕುಲಪತಿಗಳ ಅನುಮೋದನ ದಿನಾಂಕ: 09.05.2025

*****

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ದ 59ನೇ ಪ್ರಕರಣದ 17ನೇ ಉಪಬಂಧದಲ್ಲಿ ಪ್ರದತ್ತವಾದ ಅಧಿಕಾರದನ್ವಯ ಬೆಂಗಳೂರು ಉತ್ತರ ವಿಶ್ವವಿದ್ಯಾಲಯವು 2025-26 ನೇ ಶೈಕ್ಷಣಿಕ ಸಾಲಿಗೆ ಈ ಕೆಳಕಂಡ ಶಿಕ್ಷಣ ಕಾಲೇಜಿನಲ್ಲಿ ನಡೆಸಲಾಗುತ್ತಿರುವ ಬಿ.ಇಡಿ ಕೋರ್ಸಿಗೆ ಅದರ ಮುಂದೆ ನಮೂದಿಸಿರುವ ವಿದ್ಯಾರ್ಥಿ ಪ್ರಮಾಣದೊಂದಿಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಸಂಯೋಜನೆಯನ್ನು ನವೀಕರಿಸಲಾಗಿದೆ.

| ಕ್ರಮ ಸಂಖ್ಯೆ | ಕಾಲೇಜಿನ ಹೆಸರು ಮತ್ತು ವಿಳಾಸ | ಕೋರ್ಸ್ | ವಿದ್ಯಾರ್ಥಿ ಪ್ರಮಾಣ |
|---|---|---|---|
| 01 | **ಎಂ.ವಿ.ಜೆ ಕಾಲೇಜ್ ಆಫ್ ಎಜುಕೇಷನ್ ಮಾರತ್ ಹಳ್ಳಿ, ಹೆಚ್.ಎ.ಎಲ್ ಕಾಲೋನಿ, ಬೆಂಗಳೂರು -** | **ಬಿ.ಇಡಿ** | **100** |

**ವಿ.ಸೂ:** 2025-26 ನೇ ಶೈಕ್ಷಣಿಕ ಸಾಲಿನ ಸ್ಥಳೀಯ ವಿಚಾರಣಾ ಸಮಿತಿಯ ವರದಿಯನ್ನುಲಗತ್ತಿಸಿದೆ. ಕಾಲೇಜುಗಳಿಗೆ ಸಿಂಡಿಕೇಟ್ ನಿಗಧಿಪಡಿಸಿದ ವಿದ್ಯಾರ್ಥಿ ಪ್ರಮಾಣದೊಂದಿಗೆ ಮಾತ್ರ ಸಂಯೋಜನೆಯನ್ನು ನವೀಕರಿಸಲಾಗಿದೆ. ಕಾಲೇಜು 15 ದಿನಗಳ ಒಳಗಾಗಿ ಸ್ಥಳೀಯ ವಿಚಾರಣಾ ಸಮಿತಿಯ ವರದಿಯಲ್ಲಿ ನಮೂದಿಸಿರುವ ಕೊರತೆಗಳನ್ನು ಸರಿದೂಗಿಸಿಕೊಂಡು ಉತ್ತಮ ಪಡಿಸಿಕೊಂಡಿರುವ ಬಗ್ಗೆ ಹಾಗೂ ನ್ಯೂನ್ಯತೆಗಳನ್ನು ಸರಿಪಡಿಸಿಕೊಂಡಿರುವ ಕುರಿತು ಅನುಸರಣಾ ವರದಿಯನ್ನು ನೀಡತಕ್ಕದ್ದು, ಇಲ್ಲವಾದಲ್ಲಿ ಮುಂದಿನ ಶೈಕ್ಷಣಿಕ ವರ್ಷದ ಸಂಯೋಜನಾ ನವೀಕರಣದ ಅರ್ಜಿಯನ್ನು ಸ್ವೀಕರಿಸಲಾಗುವುದಿಲ್ಲ.

**ಷರತ್ತುಗಳು:**

1. ವಿದ್ಯಾರ್ಥಿಗಳ ಪ್ರವೇಶವನ್ನು ಕಾಲಕಾಲಕ್ಕೆ ತಿದ್ದುಪಡಿಯಾದ ಕರ್ನಾಟಕ ಬಿ.ಇಡಿ ಕೋರ್ಸ್ ಅಭ್ಯರ್ಥಿಗಳ ಆಯ್ಕೆ ನಿಯಮಗಳನ್ವಯ ಕಟ್ಟು- ನಿಟ್ಟಾಗಿ ಪಡೆಯತಕ್ಕದ್ದು.
2. ಕರ್ನಾಟಕ ಬಿ.ಇಡಿ ಕೋರ್ಸುಗಳಿಗೆ ಅಭ್ಯರ್ಥಿಗಳ ಆಯ್ಕೆ ನಿಯಮಗಳು 1999 ರ 2(1) ನೇ ನಿಯಮದಡಿಯಲ್ಲಿ ನಿರ್ಧರಿಸಲಾಗಿರುವ ವಿದ್ಯಾರ್ಥಿ ಪ್ರಮಾಣಕ್ಕೆ ಅನುಗುಣವಾಗಿ ಮತ್ತು ಪೂರಕವಾಗಿ ವಿಧಿಸಲಾಗಿರುವ ಷರತ್ತುಗೊಳಪಟ್ಟು ವಿದ್ಯಾರ್ಥಿಗಳ ಪ್ರವೇಶ ಪಡೆಯತಕ್ಕದ್ದು.
3. ಕಾಲೇಜು ಎನ್.ಸಿ.ಟಿ.ಇ ಅಧಿನಿಯಮ 1993ರ 14ನೇ ಪ್ರಕರಣದಡಿ ಮಾನ್ಯತೆಯನ್ನು ಹೊಂದಿರತಕ್ಕದ್ದು.
4. **ಕಾಲೇಜು ಎನ್.ಸಿ.ಟಿ.ಇ ಜಾರಿಗೊಳಿಸಿರುವ ನೋಟಿಸ್ ನಲ್ಲಿ ನಿರ್ದಿಷ್ಟ ಪಡಿಸಲಾಗಿರುವ ಷರತ್ತುಗಳನ್ನು ಕಟ್ಟು-ನಿಟ್ಟಾಗಿ ಪೂರೈಸತಕ್ಕದ್ದು. ಎನ್.ಸಿ.ಟಿ.ಇ ಮಾನ್ಯತೆ ಹೊಂದದ ಹೊರತು ಕಾಲೇಜು ವಿದ್ಯಾರ್ಥಿಗಳ ಪ್ರವೇಶ ಪಡೆಯತಕ್ಕದಲ್ಲ.**
5. ಕಾಲೇಜು ಹೆಸರು, ಕಟ್ಟಡ ಸ್ಥಳ ಬದಲಾವಣೆಗೆ ಎನ್.ಸಿ.ಟಿ.ಇ, ಸರ್ಕಾರ ಮತ್ತು ವಿಶ್ವವಿದ್ಯಾಲಯದ ಅನುಮತಿಯನ್ನು ಕಡ್ಡಾಯವಾಗಿ ಪಡೆಯತಕ್ಕದ್ದು.
6. ನಿರ್ದಿಷ್ಟ ವಿನಾಯಿತಿ ನೀಡಿದ ಹೊರತು ವಿಶ್ವವಿದ್ಯಾಲಯ ಮಂಜೂರು ಮಾಡಿರುವ ಮುಂದುವರಿಕೆ ಸಂಯೋಜನೆ ಮತ್ತು ಎನ್.ಸಿ.ಟಿ.ಇ ಮಂಜೂರು ಮಾಡಿರುವ ಮಾನ್ಯತೆ ರಹಿತವಾಗಿ ವಿದ್ಯಾರ್ಥಿಗಳ ಪ್ರವೇಶ ಪಡೆಯುವುದು, **ಕರ್ನಾಟಕ ಮಾನ್ಯತೆ ರಹಿತ ಮತ್ತು ಅಸಂಯೋಜಿತ ಶಿಕ್ಷಣ ಸಂಸ್ಥೆಗಳಿಗೆ ವಿದ್ಯಾರ್ಥಿಗಳ ಪ್ರವೇಶ ನಿಷೇದ ಅಧಿನಿಯಮ 1992 ರ 3ನೇ ಪ್ರಕರಣದ ಉಲ್ಲಂಘನೆಯಾಗಿದ್ದು ಮೊಕದ್ದಮೆ ಹೂಡಲು ಆಕರ್ಷಿತವಾಗಿರುತ್ತದೆ.**
7. ನಿಗಧಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಪ್ರವೇಶ ಪಡೆಯುವುದು ಕೆ.ಎಸ್.ಯು ಅಧಿನಿಯಮ 2000ದ 60ನೇ ಪ್ರಕರಣದ ಉಲ್ಲಂಘನೆಯಲ್ಲಿದೆ ಮೇಲ್ಕಂಡ 1992ರ ಅಧಿನಿಯಮ 4ನೇ ಪ್ರಕರಣದ ಉಲ್ಲಂಘನೆ ಸಹ ಆಗಿದ್ದು ಮೊಕದ್ದಮೆ ಹೂಡಲು ಆರ್ಕಷಿತವಾಗುವುದಲ್ಲದೆ ಸಂಯೋಜನೆ ಹಿಂತೆಗೆದುಕೊಳ್ಳಲು ಸಕಾರಣವಾಗುತ್ತದೆ.
8. ಸ್ಥಳೀಯ ವಿಚಾರಣಾ ಸಮಿತಿ ವಿಧಿಸಿರುವ ಷರತ್ತುಗಳನ್ನು ಕಟ್ಟು-ನಿಟ್ಟಾಗಿ ಪಾಲಿಸತಕ್ಕದ್ದು.
9. ವಿಶ್ವವಿದ್ಯಾಲಯವು, ಕಾಲೇಜಿನ ವಿದ್ಯಾರ್ಥಿಗಳು, ಬೋಧಕರು ಹಾಗೂ ಬೋಧಕೇತ ನೌಕರರ ಬಗ್ಗೆ ಕಾಲಕಾಲಕ್ಕೆ ಹೊರಡಿಸುವ ನಿಯಮಾವಳಿ/ ಪರಿನಿಯಮಾವಳಿ ಮತ್ತು ಆದೇಶಗಳನ್ನು ಕಾಲೇಜು ಪಾಲಿಸತಕ್ಕದ್ದು, ಕಾಲೇಜು ವಿಶ್ವವಿದ್ಯಾಲಯದ ಸಂಯೋಜನಾ ಅಧಿಸೂಚನೆಗನುಗುಣವಾಗಿ ಕೋರ್ಸುಗಳಿಗೆ ನಿಗಧಿಪಡಿಸಿರುವ ಅರ್ಹತಾ ನಿಯಮಾವಳಿಗಳನ್ನು ಉಲ್ಲಂಘಿಸದಂತೆ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಸಿಕೊಳ್ಳತಕ್ಕದ್ದು.

10. ವೈಶಾಕ (V/S) ರಾಜಸ್ಥಾನದ ರಾಜ್ಯ ಸರ್ಕಾರದ ವಾಣಿಜ್ಯಕ್ಕೆ ಸಂಬಂಧಿಸಿದಂತೆ, ದಿನಾಂಕ:13.08.1997ರ ಸರ್ವೋಚ್ಚ ನ್ಯಾಯಾಲಯದ ತೀರ್ಪಿನಂತೆ, ಕಾಲೇಜು ಅಥವಾ ಕಛೇರಿ, ಕೆಲಸ ನಿರ್ವಹಿಸುವ ಸ್ಥಳಗಳಲ್ಲಿ ಯಾವುದೇ ವ್ಯಕ್ತಿಯಿಂದ (ಬೋಧಕ/ಬೋಧಕೇತರ/ ಆಡಳಿತ ಮಂಡಳಿ) ಅಥವಾ ವಿದ್ಯಾರ್ಥಿಯಿಂದ ಮಹಿಳೆಯರಿಗೆ/ ವಿದ್ಯಾರ್ಥಿನಿಯರಿಗೆ ಯಾವುದೇ ರೀತಿಯಾದ ಕಿರುಕುಳ ಲೈಂಗಿಕ ಕಿರುಕುಳ ನೀಡುವುದು ಶಿಕ್ಷಾರ್ಹ ಅಪರಾಧವಾಗಿದೆ. ಯಾವುದೇ ವ್ಯಕ್ತಿ/ ವಿದ್ಯಾರ್ಥಿ ಈ ರೀತಿಯಾದ ಚಟುವಟಿಕೆಗಳಲ್ಲಿ ಭಾಗಿಯಾಗಿದ್ದಲ್ಲಿ ಅಂತಹವರನ್ನು ಕೆಲಸದಿಂದ/ ವಿದ್ಯಾರ್ಥಿದೆಸೆಯಿಂದ ವಿಮುಕ್ತಿಗೊಳಿಸಬಹುದಾಗಿದೆ. ಕಾಲೇಜು ಈ ರೀತಿಯ ಅಪರಾಧಗಳನ್ನು / ಚಟುವಟಿಕೆಗಳನ್ನು ಮಟ್ಟಹಾಕಲು ಸರ್ವೋಚ್ಚ ನ್ಯಾಯಲಯದ ಆದೇಶದಂತೆ ದೂರು ಸಮಿತಿಯನ್ನು ಸ್ಥಾಪನೆ ಮಾಡತಕ್ಕದ್ದು.
11. ವಿದ್ಯಾರ್ಥಿಗಳನ್ನು ಶೈಕ್ಷಣಿಕವಾಗಿ ಅಭಿವೃದ್ಧಿಗೊಳಿಸುವ ಮಟ್ಟಕ್ಕೆ ಕಾಲೇಜು ಕೋರ್ಸುಗಳ ಶಿಕ್ಷಣ ಕ್ರಮವನ್ನು ಉತ್ತಮಪಡಿಸತಕ್ಕದ್ದು. ವಿದ್ಯಾರ್ಥಿಗಳನ್ನು ಹಾಗೂ ಸೇವೆಯಲ್ಲಿರುವ ಬೋಧಕರುಗಳನ್ನು ಪ್ರಾಂಶುಪಾಲರು/ ಆಡಳಿತ ಮಂಡಳಿಯವರು ಸಹಾನುಭೂತಿಯಿಂದ ನೋಡಿಕೊಳ್ಳತಕ್ಕದ್ದು.
12. ಕಾಲೇಜು ವಿನಾಕಾರಣ ವಿದ್ಯಾರ್ಥಿಗಳ ಅಂಕಪಟ್ಟಿ ಹಾಗೂ ಇತರೇ ದಾಖಲೆಗಳನ್ನು ಆರು ತಿಂಗಳ ಅವಧಿ ಮೀರದಂತೆ ತಮ್ಮಲ್ಲಿಯೇ ಇಟ್ಟುಕೊಳ್ಳತಕ್ಕದ್ದಲ್ಲ. ಪ್ರವೇಶ ಅನುಮೋದನೆಗಾಗಿ ಸಲ್ಲಿಸಿರುವ ಅಂಕಪಟ್ಟಿ ಹಾಗೂ ಇತರೇ ದಾಖಲೆಗಳನ್ನು ಪ್ರವೇಶ ಅನುಮೋದನೆಯಾದ ನಂತರ ವಿದ್ಯಾರ್ಥಿಗಳಿಗೆ ತ್ವರಿತವಾಗಿ ಅವರಿಗೆ ವಿತರಣೆಯನ್ನು ಮಾಡಿ ವಿಶ್ವವಿದ್ಯಾಲಯಕ್ಕೆ ತಿಳಿಸತಕ್ಕದ್ದು.
13. ವಿದ್ಯಾರ್ಥಿಗಳು, ವರ್ಗಾವಣೆ ಪತ್ರವನ್ನು ನೀಡುವ ಬಗ್ಗೆ ಮನವಿ ಸಲ್ಲಿಸಿದ್ದಲ್ಲಿ, ಕಾಲೇಜು ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆ ನೀಡದೆ ವರ್ಗಾವಣೆ ಪತ್ರವನ್ನು ನೀಡತಕ್ಕದ್ದು. ಈ ಬಗ್ಗೆ ಆ ವರ್ಷದ/ ಸೆಮಿಸ್ಟರ್ ನ ಪೂರ್ಣವಾಗದ ಅವಧಿಯ ಬೋಧನಾ ಶುಲ್ಕವನ್ನು ಹೊರತು ಪಡಿಸಿ ಯಾವುದೇ ಹೆಚ್ಚುವರಿ ಶುಲ್ಕವನ್ನು ವಸೂಲಿ ಮಾಡತಕ್ಕದ್ದಲ್ಲ.
14. ಯಾವುದೇ ರೀತಿಯಾದ ಕ್ಯಾಪಿಟೇಷನ್ ಶುಲ್ಕವನ್ನು ಕಾಲೇಜು ವಸೂಲಿ ಮಾಡತಕ್ಕದ್ದಲ್ಲ.
15. 2026-27 ನೇ ಸಾಲಿಗೆ ಕೋರ್ಸುಗಳ ಸಂಯೋಜನಾ ನವೀಕರಣಕ್ಕೆ ಕಾಲೇಜು ತಪ್ಪದೆ ಅರ್ಜಿಯನ್ನು ಸಲ್ಲಿಸತಕ್ಕದ್ದು.
16. ಐದು ವರ್ಷಗಳನ್ನು ಪೂರೈಸಿರುವ ಕಾಲೇಜುಗಳ ನ್ಯಾಕ್ (NAAC) ಅನುಮೋದನೆಯನ್ನು ಕೂಡಲೇ ಪಡೆದುಕೊಳ್ಳತಕ್ಕದ್ದು.
17. ಪ್ರಾಂಶುಪಾಲರು, ಮೌಲ್ಯಮಾಪನ ಕಾರ್ಯಕ್ಕಾಗಿ ಅರ್ಹ ಶಿಕ್ಷಕರ ಪಟ್ಟಿಯನ್ನು ಸಂಬಂಧಿಸಿದ ಪರೀಕ್ಷಾ ಮಂಡಳಿಗಳ ಅಧ್ಯಕ್ಷರುಗಳಿಗೆ ತಪ್ಪದೇ ಸಲ್ಲಿಸತಕ್ಕದ್ದು. ತಪ್ಪಿದಲ್ಲಿ ಕಾಲೇಜಿನ ಸಂಯೋಜನೆಯನ್ನು ರದ್ದುಪಡಿಸಲಾಗುವುದು.
18. ಪ್ರತಿ ಕಾಲೇಜು ಆಯಾ ಶೈಕ್ಷಣಿಕ ವರ್ಷದಲ್ಲಿ ಕನಿಷ್ಠ ಎರಡು ಆಡಳಿತ ಮಂಡಳಿ (Governing Council) ಸಭೆಗಳನ್ನು ಕಡ್ಡಾಯವಾಗಿ ನಡೆಸಿ ವರದಿಯನ್ನು ವಿಶ್ವವಿದ್ಯಾಲಯಕ್ಕೆ ತಪ್ಪದೇ ಸಲ್ಲಿಸತಕ್ಕದ್ದು.

ಆದೇಶಾನುಸಾರ

ಕುಲಸಚಿವರು

ಕುಲಸಚಿವರು
ಬೆಂಗಳೂರು ಉತ್ತರ ವಿಶ್ವವಿದ್ಯಾಲಯ
ಟಮಕ, ಕೋಲಾರ, ಕರ್ನಾಟಕ-563 103

ಗೆ,
ಪ್ರಾಂಶುಪಾಲರು,
ಎಂ.ವಿ.ಜೆ ಕಾಲೇಜ್ ಆಫ್ ಎಜುಕೇಷನ್ ,
ಮಾರತ್ ಹಳ್ಳಿ, ಹೆಚ್.ಎ.ಎಲ್ ಕಾಲೋನಿ,
ಬೆಂಗಳೂರು .

**ಪ್ರತಿಗಳು,**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು -560 001.
2. ನಿರ್ದೇಶಕರು, ಕಾಲೇಜು ಶಿಕ್ಷಣ ಆಯುಕ್ತರು, ಬೆಂಗಳೂರು -560 001.
3. ಕುಲಸಚಿವರು (ಮೌ), ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಶ್ರೀ ದೇವರಾಜ ಅರಸು ಬಡಾವಣೆ ಟಮಕ, ಕೋಲಾರ-563 103.
4. ಅಧ್ಯಕ್ಷರು, ಎನ್.ಸಿ.ಟಿ.ಇ , ಎಸ್.ಆರ್.ಸಿ.ಎಫ್ , ನ್ಯಾಷನಲ್ ಲಾ ಸ್ಕೂಲ್ ಎದುರು, ನಾಗರ ಭಾವಿ ಬೆಂಗಳೂರು- 560 072.
5. ಪ್ರಾದೇಶಿಕ ನಿರ್ದೇಶಕರು, ಎನ್.ಸಿ.ಟಿ.ಇ , ಎಸ್.ಆರ್.ಸಿ.ಎಫ್ , ನ್ಯಾಷನಲ್ ಲಾ ಸ್ಕೂಲ್ ಎದುರು, ನಾಗರ ಭಾವಿ ಬೆಂಗಳೂರು- 560 072.
6. ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಭೇತಿ ನಿರ್ದೇಶಕರು, 100 ಅಡಿ ರಿಂಗ್ ರಸ್ತೆ, ಬನಶಮಕರಿ 3ನೇ ಹಂತ ಬೆಂಗಳೂರು -560 085.
7. ವಿಶೇಷಾಧಿಕಾರಿಗಳು, ಕೇಂದ್ರಿಕೃತ ದಾಖಲಾತಿ ಘಟಕ, ಕಾವೇರಿ ಭವನದ ಎದುರು, ಬೆಂಗಳೂರು – 560 009.
8. ಕುಲಸಚಿವರು, ಅಧೀಕ್ಷರು, ಶೈಕ್ಷಣಿಕ ವಿಭಾಗ-1/4 ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಶ್ರೀ ದೇವರಾಜ ಅರಸು ಬಡಾವಣೆ ಟಮಕ, ಕೋಲಾರ-563 103.
9. ಕಚೇರಿ ಪ್ರತಿ.